ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಮಂಗಳವಾರ, ದಿನಾಂಕ : 23ನೇ ಜುಲೈ, 2019

"ನಮ್ಮ ಗ್ರಾಮ ನಮ್ಮ ರಸ್ತೆ" ಯೋಜನೆಯ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

488 (674) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಮ್ಮ ಗ್ರಾಮ-ನಮ್ಮ ರಸ್ತೆ ಯೋಜನೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿನ ರಸ್ತೆಗಳ ಅಭಿವೃದ್ಧಿಗಾಗಿ ಎಷ್ಟು ಅಂದಾಜು ಮೊತ್ತನ್ನು ಯಾವ ಯಾವ ರಸ್ತೆಗಳನ್ನು ವಿವಿಧ ಹಂತದಲ್ಲಿ ಪರಿಗಣಿಸಲಾಗಿದೆ; (ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯ ಯಾವ ಯಾವ ರಸ್ತೆಗಳು ಉಚಿತ ನಿರ್ವಹಣೆ ಮತ್ತು ದುರಸ್ಥಿ ಕೈಗೊಳ್ಳುವ ಕರಾರಿನಲ್ಲಿವೆ; ಅದರಂತೆ ಉಚಿತ ನಿರ್ವಹಣೆ ಮತ್ತು ದುರಸ್ಥಿ ಮಾಡಲಾಗಿದೆಯೇ;

(ಇ) ಹಾಗಿದ್ದಲ್ಲಿ, ಅಂತಹ ರಸ್ತೆಗಳು ಯಾವುವು; ಯಾವಾಗ ಮಾಡಲಾಗಿದೆ; (ವಿವರ ನೀಡುವುದು)

(ಈ) ನಮ್ಮ ಗ್ರಾಮ-ನಮ್ಮ ರಸ್ತೆ ಯೋಜನೆಯಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಹಾಗೂ ಇತರೆ ಯೋಜನೆಯಲ್ಲಿ ಪರಿಗಣಿಸಿದ ರಸ್ತೆಗಳು ಯಾವುವು; ಇವುಗಳ ಕಾಮಗಾರಿಯ ಹಂತವೇನು; (ಪೂರ್ಣ ಮಾಹಿತಿ ನೀಡುವುದು)

(ಉ) ಕೆಲವು ರಸ್ತೆಗಳು ಆರಂಭದ ಹಂತದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಅವುಗಳ ಕಾಮಗಾರಿಗಳನ್ನು ಯಾವಾಗ ಆರಂಭಿಸಿ ಪೂರ್ಣಗೊಳಿಸಲಾಗುವುದು?